ಬಸವನಬಾಗೇವಾಡಿ ಕ್ಷೇತ್ರದಲ್ಲಿ ಸ.ಪ.ಪೂ ಕಾಲೇಜುಗಳನ್ನು ಮಂಜೂರು ಮಾಡುವುದು

4058 (4570) : ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಸವನಬಾಗೇವಾಡಿ ಕ್ಷೇತ್ರದ ಮುಳವಾಡ ಮಮದಾಪುರ ಮಲಘಾರಾಗಳಿಗೆ ಸರಕಾರಿ ಪದವಿ ಪೂರ್ವ ವಿದ್ಯಾಲಯಗಳನ್ನು ಮಂಜೂರು ಮಾಡುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಆ) ಹಾಗಿದ್ದರೆ, ಸರ್ಕಾರ ಕೈಗೊಂಡಿರುವ ಕ್ರಮಗಳೇನು? ವಿವರ ನೀಡುವುದು.

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ನಾಗಮಂಗಲ ತಾಲ್ಲೂಕಿನಲ್ಲಿ ಶಾಲಾ ಶಿಕ್ಷಕರ ಕೊರತೆ ಹಾಗೂ ಶಾಲಾ ಕಟ್ಟಡಗಳು

4059 (4582) : ಶ್ರೀ ಚೆಲುವರಾಯಸ್ವಾಮಿ ಎನ್. (ನಾಗಮಂಗಲ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ನಾಗಮಂಗಲ ತಾಲ್ಲೂಕಿನಲ್ಲಿರುವ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಯಾವ ಯಾವ ಶಾಲೆಗಳಲ್ಲಿ ಯಾವ ಯಾವ ವಿಷಯದ ಶಿಕ್ಷಕರ ಕೊರತೆಯಿರುವುದು, ವಿವರ ನೀಡುವುದು; ಶಿಕ್ಷಕರುಗಳನ್ನು ತುಂಬಲು ಸರ್ಕಾರದ ಕ್ರಮವೇನು;

ಆ) ನಾಗಮಂಗಲ ಟೌನ್‌ನಲ್ಲಿರುವ ಟಿ.ಸಿ.ಹೆಚ್. ಕಟ್ಟಡದ ಕೆಲಸವನ್ನು ಯಾರಿಗೆ ನೀಡಲಾಗಿದೆ; ಕಟ್ಟಡದ ಕೆಲಸ ಪ್ರಗತಿಯ ಹಂತದಲ್ಲಿದೆಯೇ; ಹಾಗಿದ್ದಲ್ಲಿ ಯಾವಾಗ ಈ ಕಟ್ಟಡವನ್ನು ಪೂರ್ಣಗೊಳಿಸಲಾಗುವುದು;

ಇ) ನಾಗಮಂಗಲ ತಾಲ್ಲೂಕಿಗೆ ಇತ್ತೀಚೆಗೆ ಪ್ರೌಢಶಾಲೆ ಹಾಗೂ ಪ್ರಾಥಮಿಕ ಶಾಲೆಗೆ ಕಟ್ಟಡ ಮಂಜೂರಾಗಿದ್ದು ಹೆಡ್ ಅಕೌಂಟಿನಲ್ಲಿ ಹಾಗೂ ಯಾರ ಶಿಫಾರಸ್ಸಿನ ಮೇಲೆ ಮಂಜೂರಾಗಿರುವುದು ವಿವರ ನೀಡುವುದು?

ಪ್ರೊ: ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು):

ಅ) ಬಂದಿದೆ.

ನಾಗಮಂಗಲ ತಾಲ್ಲೂಕಿನಲ್ಲಿ 263 ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆ ಖಾಲಿ ಇದ್ದು ಕೊರತೆ ಇರುವ ಶಾಲೆಗಳಿಗೆ ತಾತ್ಕಾಲಿಕವಾಗಿ ಶಿಕ್ಷಕರನ್ನು ನಿಯೋಜನೆ ಮಾಡಿ ಶಾಲೆಗಳು ನಡೆಯುವಂತೆ ಕ್ರಮ ಕೈಗೊಳ್ಳಲಾಗಿದೆ.

ಮಂಡ್ಯ ಜಿಲ್ಲೆಯಲ್ಲಿ 505 ಹುದ್ದೆ ಖಾಲಿ ಇದ್ದು ಸರ್ವೋಚ್ಚ ನ್ಯಾಯಾಲಯದ ತಡೆಯಾಜ್ಞೆ ಇರುವುದರಿಂದ ಈ ಜಿಲ್ಲೆಯಲ್ಲಿ 2003–04 ನೇ ಸಾಲಿನಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿ ಮಾಡುತ್ತಿಲ್ಲ. ಶಾಲೆಯಲ್ಲಿ ಖಾಲಿ ಇರುವ ಹುದ್ದೆಗಳ ಜಾಗದಲ್ಲಿ ಬದಲಿ ವ್ಯವಸ್ಥೆ ಮೇಲೆ ನಿವೃತ್ತ ಶಿಕ್ಷಕರನ್ನು ದಿನಕ್ಕೆ ರೂ. 100/– ರಂತೆ ಸಂಭಾವನೆ ನೀಡಿ ಕೆಲಸ ಮಾಡಿಸಲಾಗುತ್ತಿದೆ.